KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2026/ 912

ದಿನಾಂಕ: 05/10/2026

ತಿದ್ದುಪಡಿ ಅಧಿಸೂಚನೆ

ವಿಷಯ : ನವೆಂಬರ್ 2026 ರಲ್ಲಿ ಜರಗುವ ಎಲ್ಲ ಸ್ನಾತಕ ಪದವಿಯ **R-NEP** ಅಡಿಯಲ್ಲಿ ಬರುವ 3 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ/ಶುಲ್ಕ ತುಂಬುವ ಅವಧಿಯನ್ನು ವಿಸ್ತರಿಸುವ ಕುರಿತು.

ಉಲ್ಲೇಖ : ಅಧಿಸೂಚನೆ.ನಂ/ಕವಿವಿ/ಪರೀಕ್ಷಾ/ಜಿಎಡಿ/2026/834, ದಿನಾಂಕ:23/09/2026.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ ನವೆಂಬರ್ 2026 ರಲ್ಲಿ ಜರುಗುವ ಎಲ್ಲ ಸ್ನಾತಕ ಪದವಿಗಳ **R-NEP** ಅಡಿಯಲ್ಲಿ ಬರುವ 3 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ/ಶುಲ್ಕವನ್ನು ತುಂಬಲು ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಮುಂದುವರೆದು, ಯು.ಯು.ಸಿ.ಎಂ.ಎಸ್. ತಂತ್ರಾಂಶದ ತಾಂತ್ರಿಕ ಕಾರಣಗಳಿಂದಾಗಿ ಪರೀಕ್ಷಾ ಅರ್ಜಿ/ಶುಲ್ಕ ತುಂಬುವ ಅವಧಿಯನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

1) ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಭರಿಸಿ ದಂಡವಿಲ್ಲದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**09/10/2026.**
2) ವಿದ್ಯಾರ್ಥಿಗಳು ರೂ.**220/-** ಮೊದಲನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**12/10/2026.**
3) ವಿದ್ಯಾರ್ಥಿಗಳು ರೂ.**240/-** ಎರಡನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ:**13/10/2025.**
4) ಪ್ರಾಚಾರ್ಯರು ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು **UUCMS** ತಂತ್ರಾಂಶದ ಮೂಲಕ ಭರ್ತಿ ಮಾಡಿದ ಪರೀಕ್ಷಾ ಅರ್ಜಿ/ಶುಲ್ಕದ ವಿವರಗಳನ್ನು ಪರಿಶೀಲಿಸಿ ಯಾದಿಯನ್ನು ದಿನಾಂಕ:**15/10/2026.**

ವಿಶೇಷ ಸೂಚನೆ: ಈಗಾಗಲೇ ಹೊರಡಿಸಿದ ಉಲ್ಲೇಖಿತ ಅಧಿಸೂಚನೆಯನ್ವಯ ಪರೀಕ್ಷಾ ಅರ್ಜಿ/ಶುಲ್ಕ ಭರಿಸುವ ದಿನಾಂಕಗಳನ್ನು ಹೊರತುಪಡಿಸಿ ಉಳಿದ ಕರಾರುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

05/10/2026
ಕುಲಸಚಿವರು(ಮೌಲ್ಯಮಾಪನ)

ಗೆ,

ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1. ಸಿಸ್ಟಮ್ ಎನಾಲಿಸ್ಟ್, ಗಣಕಯಂತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2. ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (ಅಂತರ್ಜಾಲದಲ್ಲಿ ಪ್ರಕಟಿಸುವುದು)
3. ಕುಲಪತಿಗಳ, ಕುಲಸಚಿವರ, ಕುಲಸಚಿವರು(ಮೌಲ್ಯಮಾಪನ), ವಿತ್ತಾಧಿಕಾರಿಗಳು ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ ಧಾರವಾಡ.
4. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5. ಎಲ್ಲ ಅಧೀಕ್ಷಕರುಗಳಿಗೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.